# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್. ರಸ್ತೆ, ತುಮಕೂರು-572 103 ☎:0816-2255650,2273511 ಫ್ಯಾಕ್ಸ್:0816-2270719


ಸಂಖ್ಯೆ:ತುವಿ:ಪವಿ:2024-25/130 ದಿನಾಂಕ:21.05.2024

## : ಸುತ್ತೋಲೆ :

ವಿಷಯ : ವಿವಿಧ ಸ್ನಾತಕ ಪದವಿ ಪರೀಕ್ಷೆಗಳ ಪರೀಕ್ಷಾ ದಿನಗಳನ್ನು ಕಡಿತಗೊಳಿಸುವ ಸಂಬಂಧ ಎಲ್ಲಾ ಸ್ನಾತಕ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳ ಸಭೆ ಏರ್ಪಡಿಸಿರುವ ಕುರಿತು.

ಉಲ್ಲೇಖ : ಈ ಕಚೇರಿ ಅಧಿಸೂಚನೆ ಸಂಖ್ಯೆ:ತುವಿ:ಪವಿ:2024-25/80 ದಿನಾಂಕ:04.05.2024

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2023-24 ನೇ ಶೈಕ್ಷಣಿಕ ಸಾಲಿನ I, III & V ನೇ ಸೆಮಿಸ್ಟರ್‌ನ ವಿವಿಧ ಸ್ನಾತಕ ಪದವಿ ಪರೀಕ್ಷೆಗಳು ಸುಮಾರು ಎರಡು ತಿಂಗಳಿಗೂ ಹೆಚ್ಚು ದಿನ ನಡೆದಿದ್ದು ಈ ಸಂಬಂಧ ಪರೀಕ್ಷಾ ದಿನಗಳನ್ನು ಕಡಿತಗೊಳಿಸುವ ಸಂಬಂಧ ಉಲ್ಲೇಖದನ್ವಯ ಘಟಕ/ಸಂಯೋಜಿತ ವಿವಿಧ ಸ್ನಾತಕ ಪದವಿ ಕಾಲೇಜಿನ ಐದು ಜನ ಪ್ರಾಂಶುಪಾಲರುಗಳನ್ನೊಳಗೊಂಡ ಕರಡು ಪರೀಕ್ಷಾ ವೇಳಾಪಟ್ಟಿ ಸಮಿತಿ ರಚಿಸಲಾಗಿದ್ದು, ಸದರಿ ಸಮಿತಿಯು ದಿನಾಂಕ:17.05.2024 ರಂದು ಮಾನ್ಯ ಕುಲಸಚಿವರು(ಮೌಲ್ಯಮಾಪನ) ಇವರ ಕೊಠಡಿ, ಪರೀಕ್ಷಾ ಭವನ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಇಲ್ಲಿ ಸಭೆ ಸೇರಿ ಪರೀಕ್ಷಾ ದಿನಗಳನ್ನು ಕಡಿತಗೊಳಿಸುವ ಸಂಬಂಧ ಚರ್ಚಿಸಿ ಸಂಬಂಧಿತ ಮಾಹಿತಿ ಪಡೆಯಲು ಎಲ್ಲಾ ಸ್ನಾತಕ ಪದವಿ ಕಾಲೇಜು ಪ್ರಾಂಶುಪಾಲರುಗಳ ಜ಼ೂಮ್ ಮೀಟಿಂಗ್ ಕರೆಯುವಂತೆ ಸೂಚಿಸಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಎಲ್ಲಾ ಸ್ನಾತಕ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳು **ದಿನಾಂಕ:23.05.2024 ರ ಗುರುವಾರದಂದು ಮಧ್ಯಾಹ್ನ 12.00 ಘಂಟೆಗೆ ಕಡ್ಡಾಯವಾಗಿ ಆನ್‌ಲೈನ್ ಸಭೆಗೆ ಹಾಜರಾಗುವಂತೆ ಈ ಮೂಲಕ ತಿಳಿಸುತ್ತಾ, ಸಂಬಂಧಪಟ್ಟ ಲಿಂಕ್ ಅನ್ನು ನಂತರದಲ್ಲಿ ಹಂಚಿಕೊಳ್ಳಲಾಗುವುದು.**

21/5/24

**ಕುಲಸಚಿವರು(ಮೌಲ್ಯಮಾಪನ)**

ಕುಲಸಚಿವರು (ಮೌಲ್ಯಮಾಪನ)
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

ಎಲ್ಲಾ ಪ್ರಾಂಶುಪಾಲರುಗಳು, ಘಟಕ / ಸಂಯೋಜಿತ ಸ್ನಾತಕ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು

ಪ್ರತಿಗಳು :

1. ಮಾನ್ಯ ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು – **ಇಂದೇ ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ ಪ್ರಕಟಿಸುವುದು ಹಾಗೂ ಎಲ್ಲಾ ಸ್ನಾತಕ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಇ-ಮೇಲ್ ಮುಖಾಂತರ ಕಳುಹಿಸುವುದು.**
5. ವಿಭಾಗದ ಮೇಲ್ವಿಚಾರಕರು, ಫಲಿತಾಂಶ ಗಣಕೀಕರಣ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6. ಕಛೇರಿ ಪ್ರತಿ.